# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದಲ್ಲಿ ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ, 2011ನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಜಿಲ್ಲಾ ಮಾಹಿತಿ ತಂತ್ರಜ್ಞಾನ ಸಮಾಲೋಚಕರ ಸಂಭಾವನೆಗಾಗಿ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ :

1. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 28 ಇಕಾಅ 2012, ದಿನಾಂಕ:28/03/2012.
2. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 66 ಇಕಾಅ 2012, ದಿನಾಂಕ: 2/4/2012.
3. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 171 ನಾಸೇಖಾ 2012, ದಿನಾಂಕ: 25/9/2012.
4. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 119 ನಾಸೇಖಾ 2012, ದಿನಾಂಕ: 29/11/2012.
5. ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 587 ವೆಚ್ಚ-12/2012, ದಿನಾಂಕ: 07/07/2012.
6. ಜಿಲ್ಲಾಧಿಕಾರಿ, ಮೈಸೂರು ರವರ ಇ-ಮೈಲ್ ಸಂದೇಶದ ದಿನಾಂಕ:21/1/2013.

ಪ್ರಸ್ತಾವನೆ :

ಮೇಲೆ ಓದಲಾದ (1) ರಲ್ಲಿ ರಾಜ್ಯ ಸರ್ಕಾರವು 11 ಇಲಾಖೆಗಳ ಮುಖಾಂತರ 151 ಕಾಲಮಿತಿ ಸೇವೆಗಳನ್ನು ಕರ್ನಾಟಕ ನಾಗರೀಕರಿಗೆ ಒದಗಿಸಲು ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ, 2011 ಅನ್ನು ದಿನಾಂಕ:02/04/2012 ರಿಂದ ರಾಜ್ಯಾದ್ಯಂತ ಅನುಷ್ಠಾನಗೊಳಿಸಲಾಗಿದೆ.

ಮೇಲೆ ಓದಲಾದ (2) ಮತ್ತು (3) ರ ಸರ್ಕಾರಿ ಆದೇಶಗಳಲ್ಲಿ ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ. 2011 ನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಕಿಯೋನಿಕ್ಸ್ ಸಂಸ್ಥೆಯಿಂದ ಪ್ರತಿ ಜಿಲ್ಲೆಗೆ ಒಬ್ಬ ಐ.ಟಿ. ಕನ್ಸಲ್ಟೆಂಟ್‌ರವರ ಸೇವೆಯನ್ನು ಪಡೆಯಲು ಆದೇಶಿಸಲಾಗಿದೆ. ಅದರಂತೆ, ಮಾರ್ಚ್ 2013 ರವರೆಗೆ ಜಿಲ್ಲಾ ಐ.ಟಿ. ಸಮಾಲೋಚಕರ ಸೇವೆಯನ್ನು ಮುಂದುವರೆಸಿ, ಪ್ರತಿ ತಿಂಗಳಿಗೆ ರೂ.15,000/-(ಹದಿನೈದು ಸಾವಿರ ರೂಪಾಯಿಗಳು ಮಾತ್ರ)ಗಳಂತೆ ಸಂಭಾವನೆಯನ್ನು ಈಗಾಗಲೇ 30 ಜಿಲ್ಲೆಗಳಿಗೆ 06 ತಿಂಗಳ ಅವಧಿಗೆ ಅಂದರೆ ಮಾರ್ಚ್ 2013 ರ ಅಂತ್ಯದವರೆಗೆ ಪ್ರತಿ ಜಿಲ್ಲಾಧಿಕಾರಿಗೆ ರೂ.90,000/-(ತೊಂಬತ್ತು ಸಾವಿರ ರೂಪಾಯಿಗಳು ಮಾತ್ರ)ಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.

ಮೇಲೆ ಓದಲಾದ (4) ರ ಅಧಿಸೂಚನೆ-3 ರಲ್ಲಿ ಹೆಚ್ಚುವರಿ ಸೇವೆಗಳಲ್ಲಿ 18 ಇಲಾಖೆಗಳ 93 ಹೆಚ್ಚುವರಿ ಸೇವೆಗಳನ್ನು (7 ಹೊಸ ಇಲಾಖೆಗಳನ್ನೊಳಗೊಂಡಂತೆ) ಹಾಗೂ ಸಿಬ್ಬಂದಿ ಕಲ್ಯಾಣಕ್ಕೆ ಸಂಬಂಧಿಸಿದಂತೆ ಕರ್ನಾಟಕ ಸರ್ಕಾರದ ಸಚಿವಾಲಯದಲ್ಲಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ 21 ಸೇವೆಗಳನ್ನು ಒಟ್ಟಾರೆ 265 ಸೇವೆಗಳನ್ನು ದಿನಾಂಕ: 3/12/2012 ರಿಂದ ರಾಜ್ಯದಾದ್ಯಂತ ಜಾರಿಗೆ ಬರುವಂತೆ ಆದೇಶ ಹೊರಡಿಸಲಾಗಿದೆ.

ಮೇಲೆ ಓದಲಾದ (5) ರ ಆರ್ಥಿಕ ಇಲಾಖೆಯ ಟಿಪ್ಪಣಿಯಲ್ಲಿ ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ, 2011 ರ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳಿಗೆ ಸಹಕರಿಸಲು, ಜಿಲ್ಲಾಧಿಕಾರಿಗಳು ನೇಮಿಸಿಕೊಂಡಿರುವ ಜಿಲ್ಲಾ ಮಾಹಿತಿ ತಂತ್ರಜ್ಞಾನ ಸಮಾಲೋಚಕರ ನೇಮಕಾತಿಯನ್ನು ಈಗಾಗಲೇ ವಿಧಿಸಿರುವ ಷರತ್ತು ಮತ್ತು ನಿಬಂಧನೆಗೊಳಪಟ್ಟು ಮಾರ್ಚ್ 2013 ರವರೆಗೆ ಹೊರಗುತ್ತಿಗೆ ಮೇಲೆ ಪಡೆದ ಸೇವೆಯನ್ನು ಮುಂದುವರೆಸಲು ಆರ್ಥಿಕ ಇಲಾಖೆಯು ಸಹಮತಿಸಿದೆ.

ಮೇಲೆ ಓದಲಾದ (6) ರ ಪತ್ರದಲ್ಲಿ ಮೈಸೂರು ಜಿಲ್ಲಾಧಿಕಾರಿಯವರು ಶ್ರೀಮತಿ ಶಿಲ್ಪಶ್ರೀ .ಎಸ್. ರವರನ್ನು ಐ.ಟಿ. ಸಮಾಲೋಚಕನ್ನಾಗಿ ಕಿಯೋನಿಕ್ಸ್ ಸಂಸ್ಥೆ ಮುಖಾಂತರ ದಿನಾಂಕ: 03/12/2012 ರಿಂದ ಪಡೆದಿರುವುದರಿಂದ ಇವರ ಸಂಭಾವನೆಯನ್ನು ರೂ.15,019 ಮತ್ತು ಸೇವಾ ಶುಲ್ಕ ರೂ.1691, ಸೇವಾ ತೆರಿಗೆ ರೂ.2090 ಹಾಗೂ ವೃತ್ತಿ ತೆರಿಗೆ ರೂ.200/-ಗಳು ಸೇರಿ ಹೆಚ್ಚುವರಿ ರೂ.4,000/-ಗಳು ಸೇರಿದಂತೆ ಒಟ್ಟು ರೂ.19,000/-ಗಳನ್ನು ಪಾವತಿಸುವಂತೆ ಕಿಯೋನಿಕ್ಸ್ ಸಂಸ್ಥೆ ಕೋರಿರುವುದಾಗಿ ಮೈಸೂರು ಜಿಲ್ಲಾಧಿಕಾರಿಯವರು ಪತ್ರದಲ್ಲಿ ತಿಳಿಸಿರುತ್ತಾರೆ. ಉಲ್ಲೇಖ (3) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಅಕ್ಟೋಬರ್ 2012 ರಿಂದ ಮಾರ್ಚ್ 2013 ರವರೆಗೆ, ತಿಂಗಳಿಗೆ ರೂ.15,000/-ಗಳಂತೆ ರೂ.90,000/-ಗಳನ್ನು (ತೊಂಬತ್ತು ಸಾವಿರ ರೂಪಾಯಿಗಳು ಮಾತ್ರ) ಗಳನ್ನು ಬಿಡುಗಡೆ ಮಾಡಲಾಗಿದೆ. ಡಿಸೆಂಬರ್ 03 ರಿಂದ ಮಾರ್ಚ್ 2013 ರವರೆಗೆ ಅಂದರೆ ಮೂರು ತಿಂಗಳು 29 ದಿನಗಳಿಗೆ ತಗಲುವ ಹೆಚ್ಚುವರಿ ಸಂಭಾವನೆ ರೂ.14,774/-(ಹದಿನಾಲ್ಕು ಸಾವಿರದ ಏಳುನೂರ ಎಪ್ಪತ್ನಾಲ್ಕು ರೂಪಾಯಿಗಳು ಮಾತ್ರ) ಗಳನ್ನು ಪಾವತಿಸಲು ನಿರ್ಧರಿಸಲಾಗಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

| ಕ್ರಮ ಸಂಖ್ಯೆ | ಜಿಲ್ಲೆಯ ಹೆಸರು | ಕಿಯೋನಿಕ್ಸ್ ಸಂಸ್ಥೆಯಿಂದ ಪಡೆದ ಐ.ಟಿ.ಕನ್ಸಲ್ಟೆಂಟ್ ರವರ ವೇತನ ದಿನಾಂಕ | ಈಗಾಗಲೇ ಬಿಡುಗಡೆ ಮಾಡಿರುವ ಅನುದಾನ (ಏಪ್ರಿಲ್ 2012 ರಿಂದ ಸೆಪ್ಟೆಂಬರ್ 2012 ರವರೆಗೆ) (ರೂ.ಗಳಲ್ಲಿ) | ದಿನಾಂಕ: 25/9/2012 ರ ಆದೇಶದಲ್ಲಿ ಮಂಜೂರು ಮಾಡಿರುವ ಅನುದಾನ (ಅಕ್ಟೋಬರ್ 2012 ರಿಂದ ಮಾರ್ಚ್ 2013 ರವರೆಗೆ) (ರೂ.ಗಳಲ್ಲಿ) | ಪ್ರಸ್ತುತ ಐ.ಟಿ.ಕನ್ಸಲ್ಟೆಂಟ್ ವೇತನಕ್ಕಾಗಿ ಬಿಡುಗಡೆ ಮಾಡಬೇಕಾದ ಹೆಚ್ಚುವರಿ ಮೊತ್ತ (ರೂ.ಗಳಲ್ಲಿ) |
|---|---|---|---|---|---|
| 1 | 2 | 3 | 4 | 5 | 6 |
| 1 | ಜಿಲ್ಲಾಧಿಕಾರಿಗಳು, ಮೈಸೂರು ಜಿಲ್ಲೆ | 03/12/2012 ರಿಂದ 31/03/2013 | 90,000/- | 90,000/- | 14,774/- |

<u>ಸರ್ಕಾರದ ಆದೇಶ ಸಂಖ್ಯೆ : ಸಿಆಸುಇ 70 ಇಕಾಅ 2012,</u>
<u>ಬೆಂಗಳೂರು, ದಿನಾಂಕ : 05/02/2013</u>

ಮೇಲೆ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ, 2011 ನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ, ಜಿಲ್ಲಾಧಿಕಾರಿಗಳಿಗೆ ಸಹಕರಿಸಲು,

ಜಿಲ್ಲಾಧಿಕಾರಿಗಳು ಕಿಯೋನಿಕ್ಸ್ ಸಂಸ್ಥೆ ಮುಖಾಂತರ ಹೊರಗುತ್ತಿಗೆ ಆಧಾರದ ಮೇಲೆ ಪಡೆದಿರುವ ಜಿಲ್ಲಾ ಮಾಹಿತಿ ತಂತ್ರಜ್ಞಾನ ಸಮಾಲೋಚಕರಿಗೆ ಕಿಯೋನಿಕ್ಸ್ ಸಂಸ್ಥೆ ನಿಗದಿಪಡಿಸಿರುವ ಸಂಭಾವನೆಯ ಹೆಚ್ಚುವರಿ ಮೊತ್ತವನ್ನು, ಡಿಸೆಂಬರ್ 03 ರಿಂದ ಮಾರ್ಚ್ 2013 ರವರೆಗೆ ಅಂದರೆ ಮೂರು ತಿಂಗಳು 29 ದಿನಗಳಿಗೆ ಲೆಕ್ಕಹಾಕಿ ರೂ.14,774/-(ಹದಿನಾಲ್ಕು ಸಾವಿರದ ಏಳುನೂರ ಎಪ್ಪತ್ತನಾಲ್ಕು ರೂಪಾಯಿಗಳು ಮಾತ್ರ) ಗಳನ್ನು ಜಿಲ್ಲಾಧಿಕಾರಿ, ಮೈಸೂರು, ಇವರಿಗೆ ಪಾವತಿಸಲು "ಸಕಾಲ ಮಂಡಳಿ" ಯಿಂದ ಬಿಡುಗಡೆ ಮಾಡಲಾಗಿದೆ.

ಮೇಲಿನ ವೆಚ್ಚವನ್ನು 2012-13ನೇ ಸಾಲಿನ ಲೆಕ್ಕಶೀರ್ಷಿಕೆ 2052-00-090-0-26-051 (ಯೋಜನೇತರ) ಅಡಿಯಲ್ಲಿ ನಿಗಧಿಪಡಿಸಿದ ರೂ.15.00 ಕೋಟಿಗಳ ವೆಚ್ಚದಲ್ಲಿ ಭರಿಸತಕ್ಕದ್ದು ಮತ್ತು ಸಂಬಂಧಿಸಿದ ಇಲಾಖೆಯ ಅಧಿಕಾರಿಗೆ ಹಣ ಸೆಳೆಯುವ ಅಧಿಕಾರ ನೀಡಲಾಗಿದೆ.

ಸದರಿ ಆದೇಶವನ್ನು ಆದೇಶ ಸಂಖ್ಯೆ: ಅಇ 04 ಟಿಎಫ್‌ಪಿ 2012, ದಿನಾಂಕ:27/04/2012ರಲ್ಲಿ ಪ್ರಧಾನ ಕಾರ್ಯದರ್ಶಿಗಳು ಹಾಗೂ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಿ.ಎ. ಗಾಯತ್ರಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಆಡಳಿತ ಸುಧಾರಣೆ – ನಾಗರೀಕ ಸೇವೆಗಳು ಮತ್ತು
ರಾಜಕೀಯ ವಿಶ್ರಾಂತಿ ವೇತನ-2)

ಇವರಿಗೆ :

1. ಕರ್ನಾಟಕ ಮಹಾಲೇಖಪಾಲರು, (ಲೆಕ್ಕಪತ್ರ)/(ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಬಿ ಅಂಡ್ ಆರ್), ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಡಳಿತ ಸುಧಾರಣೆ) ಹಾಗೂ ಮಿಷನ್ ನಿರ್ದೇಶಕರು, ಸಕಾಲ ಮಂಡಳಿ, ಬಹುಮಹಡಿ ಕಟ್ಟಡ, ಬೆಂಗಳೂರು.
5. ಜಿಲ್ಲಾಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು
6. ಜಿಲ್ಲಾ ಖಜಾನಾಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು.
7. ನಿರ್ದೇಶಕರು, ಖಜಾನೆ ಇಲಾಖೆ, ಪೋಡಿಯಂ ಬ್ಲಾಕ್, ಡಾ: ಅಂಬೇಡ್ಕರ್ ವೀದಿ, ಬೆಂಗಳೂರು.
8. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
9. ಉಪ ನಿರ್ದೇಶಕರು, ಟಿ.ಎನ್.ಎಂ.ಸಿ. ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು
10. ಅಪರ ಮಿಷನ್ ನಿರ್ದೇಶಕರು, ಸಕಾಲ ಮಂಡಳಿ, ಸಿಆಸುಇ(ಆಸು) ವಿಶ್ವೇಶ್ವರಯ್ಯ ದೊಡ್ಡ ಗೋಪುರ, 20ನೇ ಮಹಡಿ, ಬೆಂಗಳೂರು.
11. ಆಡಳಿತಾಧಿಕಾರಿ, ಸಕಾಲ ಮಂಡಳಿ, ಸಿಆಸುಇ(ಆಸು), ಬೆಂಗಳೂರು.
12. ಸರ್ಕಾರದ ಉಪ ಕಾರ್ಯದರ್ಶಿ, ಸಿಆಸುಇ (ಆಸು) ರವರ ಆಪ್ತ ಸಹಾಯಕರು
13. ಹೆಚ್ಚುವರಿ ಪ್ರತಿಗಳು/ಶಾಖಾ ರಕ್ಷಾ ಕಡತ.